# HOSA DIGANTHA

**Sunday, January 16th, 2011**


## ಫೆ 1 ರಿಂದ ಜೈನ್ ವಿವಿ ಉತ್ಸವ

**ಬೆಂಗಳೂರು:** ಜೈನ್ ವಿಶ್ವವಿದ್ಯಾ ಲಯದ ವ್ಯವಹಾರ ಅಧ್ಯಯನ ಕೇಂದ್ರದ ರಾಷ್ಟ್ರೀಯ ಸಿಎಂಸ್(ಸೆಂಟರ್ ಫಾರ್ ಮ್ಯಾನೇಜ್‌ಮೆಂಟ್ ಸ್ಟಡೀಸ್) ಉತ್ಸವ ಫೆ.1ರಿಂದ 27ರ ವರೆಗೆ ನಡೆಯಲಿದೆ.

ಗುರುವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಕೇಂದ್ರದ ಮುಖ್ಯಸ್ಥ ಡಾ.ದಿನೇಶ್ ನೀಲಕಂಠ, ವಿದ್ಯಾರ್ಥಿಗಳು ಹಾಗೂ ಕಲಾವಿದರ ಬಹುವಿಧ ಪ್ರತಿಭೆಗೆ ವೇದಿಕೆ ಕಲ್ಪಿಸುವುದೇ ಈ ಕಾರ್ಯಕ್ರಮದ ಮೂಲ ಉದ್ದೇಶ ಎಂದರು.

ಕಾರ್ಯಕ್ರಮ ವಿವಿಧ ಹಂತಗಳಲ್ಲಿ ನಡೆಯಲಿದೆ. ಫೆ.1ರಂದು ನಿಮ್ಹಾನ್ಸ್ ಸಭಾಂಗಣದಲ್ಲಿ ಪ್ರಥಮ ವರ್ಷದ ಬಿಬಿಎಂ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಮಟ್ಟದ ವ್ಯವಹಾರ ನಿರ್ವಹಣಾ ಪ್ರತಿಭಾ ಪರೀಕ್ಷೆ ನಡೆಯಲಿದ್ದು, 2 ಹಾಗೂ 3ರಂದು ಅದೇ ಸಭಾಂಗಣದಲ್ಲಿ ಸಾಂಸ್ಕೃತಿಕ ಉತ್ಸವ ಜರುಗಲಿದೆ. 4ಹಾಗೂ 5ರಂದು ಜಯನಗರದ ಜೆಎಸ್‌ಎಸ್ ಸಭಾಂಗಣದಲ್ಲಿ ಕನ್ನಡ ಹಾಗೂ ಹಿಂದಿಯಲ್ಲಿ ಅಭಿನಯ ರಂಗ ಉತ್ಸವ ನಡೆಯಲಿದ್ದು, 30ಕ್ಕೂ ಹೆಚ್ಚು ರಂಗಕಲಾ ತಂಡಗಳು ಪಾಲ್ಗೊಳ್ಳಲಿವೆ ಎಂದು ಹೇಳಿದರು.

ಇದೇ ವೇಳೆ ರಂಗಭೂಮಿ ಹಾಗೂ ವ್ಯವಹಾರ ನಿರ್ವಹಣಾ ಕ್ಷೇತ್ರದ ವಿವಿಧ ಸಾಧಕರನ್ನು ಸನ್ಮಾನಿಸಲಾಗುವುದು. ಎಲ್ಲ ವಿಭಾಗಗಳಲ್ಲೂ ಮೊದಲ ಕೆಲವು ವಿಜೇತರಿಗೆ ಪದಕ ಹಾಗೂ ನಗದು ಬಹುಮಾನ ನೀಡಲಾಗುವುದು ಎಂದು ಅವರು ವಿವರಿಸಿದರು.